ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂ: DTE-ADMI0SCH2/5/2022

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು - 560001.
ದಿನಾಂಕ: 07-09-2022.

-:: ಸುತ್ತೋಲೆ ::-

**ವಿಷಯ :** **2022-23ನೇ** ಸಾಲಿಗೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವತಿಯಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನೀಡುವ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮಿನ್ಸ್ ವಿದ್ಯಾರ್ಥಿವೇತನ ಯೋಜನೆಗೆ ಅರ್ಜಿ ಸಲ್ಲಿಸುವ ಬಗ್ಗೆ.

**ಉಲ್ಲೇಖ :** ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಅಸಂನಿ/ವಿ,ವೇ/EDN/ಸಿಆರ್-03(ಬಿ)/2022-23, ದಿ: 12-08-2022.

**-0000000-**

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ತಿಳಿಸಿರುವಂತೆ, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಅರ್ಹ ಅಲ್ಪಸಂಖ್ಯಾತ ವಿದ್ಯಾರ್ಥಿಗಳು 2022-23ನೇ ಸಾಲಿಗೆ ವಿದ್ಯಾರ್ಥಿವೇತನ ಪಡೆಯಲು ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP)ರ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ಅದರಂತೆ, ವಿದ್ಯಾರ್ಥಿಗಳು ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್‌ರಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಸಂಸ್ಥೆಯ ಲಾಗಿನಲ್ಲಿ ನಿಯಮಾನುಸಾರ ಪರಿಶೀಲಿಸಿದ ನಂತರ ಮುಂದಿನ ಹಂತಕ್ಕೆ ಸಲ್ಲಿಸಬೇಕಾಗಿದ್ದು ಹಾಗೂ NSP ರಲ್ಲಿ ಎಲ್ಲಾ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳು ತಪ್ಪದೇ KYC Registration ಮಾಡುವುದು ಕಡ್ಡಾಯವಾಗಿರುತ್ತದೆ. ಅದರಂತೆ, ಅಲ್ಪಸಂಖ್ಯಾತರ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ ಯೋಜನೆಯಡಿ ಅರ್ಜಿ ಸಲ್ಲಿಸುವ ವಿಧಾನ ಮತ್ತು ಇತರೇ ಸಂಬಂಧಿಸಿದ ಮಾಹಿತಿಗಳನ್ನು ಈ ಸುತ್ತೋಲೆದೊಂದಿಗೆ ಲಗತ್ತಿಸಿ ತಮ್ಮ ಮುಂದಿನ ಮಾಹಿತಿಗಾಗಿ ಸಲ್ಲಿಸಲಾಗಿದೆ.

ಮುಂದುವರೆದು, ಅಲ್ಪಸಂಖ್ಯಾತ ವಿದ್ಯಾರ್ಥಿಗಳು ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್‌ರಲ್ಲಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 31-10-2022ರವರೆಗೂ ಹಾಗೂ ಸಲ್ಲಿಸಿರುವ ಅರ್ಜಿಗಳನ್ನು ಸಂಸ್ಥೆಯವರು ನಿಯಮಾನುಸಾರ ಪರಿಶೀಲಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿಲು ದಿನಾಂಕ: 15-11-2022ರವರೆಗೆ ನಿಗಧಿಯಾಗಿರುತ್ತದೆ ಎಂದು ಈ ಮೂಲಕ ತಿಳಿಸಲಾಗಿದೆ.

(ಟಿಪ್ಪಣಿ ಮತ್ತು ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಿದೆ)

**ಜಂಟಿ ನಿರ್ದೇಶಕರು(ಆಡಳಿತ)**
ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ,**

1. **ಪ್ರಾಂಶುಪಾಲರು,** ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜು - ಇವರ ಗಮನಕ್ಕಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಈ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ)
2. **ಸಂಯೋಜನಾಧಿಕಾರಿಯವರು,** ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. (ಇಲಾಖೆ ವೈಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು).